ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

30

ಶಾಖೆ / ವಿಷಯ : DEPARTMENT / SUBJECT: ಲೋಕಸಭಾ ಸ್ಪೀಕರ್

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ ದಿನಾಂಕ : DATE : 6/1/2021

# ನಾಗರಿಕ ಸೇವೆಗೆ ಲೋಕಸಭೆ ಸ್ಪೀಕರ್ ಓಂ ಬಿರ್ಲಾ ಪುತ್ರಿ ಅಂಜಲಿ ಆಯ್ಕೆ

**ಹೊಸದಿಲ್ಲಿ:** ಕೇಂದ್ರ ಲೋಕಸೇವಾ ಆಯೋಗ (ಯುಪಿಎಸ್‌ಸಿ) ನಡೆಸುವ ನಾಗರಿಕ ಸೇವಾ ಪರೀಕ್ಷೆಯಲ್ಲಿ ಮೊದಲ ಪ್ರಯತ್ನದಲ್ಲೇ ತೇರ್ಗಡೆಯಾಗಿರುವ ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಅವರ ಪುತ್ರಿ ಅಂಜಲಿ ಬಿರ್ಲಾ ಈಗ ನಾಗರಿಕ ಸೇವೆಗೆ ಆಯ್ಕೆಯಾಗಿರುವ ಅಭ್ಯರ್ಥಿಗಳ ಮೊದಲ ಪಟ್ಟಿಯಲ್ಲೇ ಸ್ಥಾನ ಪಡೆದಿದ್ದಾರೆ. ದಿಲ್ಲಿಯ ರಾಮ್‌ಜಾಸ್ ಕಾಲೇಜ್‌ನಲ್ಲಿ ರಾಜ್ಯಶಾಸ್ತ್ರ ಓದಿರುವ ಅಂಜಲಿ, 2019ರಲ್ಲಿ ಮೊದಲ ಪ್ರಯತ್ನದಲ್ಲಿಯೇ ಯುಪಿಎಸ್‌ಸಿ ಪರೀಕ್ಷೆ ತೇರ್ಗಡೆಯಾಗಿದ್ದರು. ''ನನ್ನ ತಂದೆಯವರಿಗೆ ಸಮಾಜದ ಬಗ್ಗೆ ಇರುವ ಕಾಳಜಿಯೇ ನಾನು ನಾಗರಿಕ ಸೇವೆ ಸೇರಲು ಪ್ರೇರಣೆ. ಮೊದಲ ಪ್ರಯತ್ನದಲ್ಲೇ ಪರೀಕ್ಷೆ ತೇರ್ಗಡೆಯಾಗಿರುವುದರ ಶ್ರೇಯ ಲೆಕ್ಕ ಪರಿಶೋಧಕಿಯಾಗಿರುವ ಹಿರಿಯ ಸಹೋದರಿ ಆಕಾಂಶಾಗೆ ಸಲ್ಲಬೇಕು. ಆಕೆ ಪ್ರತಿ ಹಂತದಲ್ಲಿಯೂ ನನಗೆ ಮಾರ್ಗದರ್ಶನ ಮಾಡಿದ್ದಾಳೆ,'' ಎಂದು ಅಂಜಲಿ ತಿಳಿಸಿದ್ದಾರೆ.



ಯುಪಿಎಸ್‌ಸಿ 2019ರಲ್ಲಿ ನಡೆಸಿದ ಐಎಎಸ್, ಐಪಿಎಸ್, ಐಎಫ್‌ಎಸ್ ಪರೀಕ್ಷೆಗಳ ಫಲಿತಾಂಶವು ಕಳೆದ ಆಗಸ್ಟ್‌ನಲ್ಲಿ ಪ್ರಕಟವಾಗಿದೆ. ಒಟ್ಟು 829 ಅಭ್ಯರ್ಥಿಗಳು ತೇರ್ಗಡೆಯಾಗಿದ್ದು, ಆ ಪೈಕಿ ಅಂಕಗಳ ಆಧಾರದಲ್ಲಿ ಅಂಜಲಿ ಸೇರಿ ನಾಗರಿಕ ಸೇವೆಗೆ ಆಯ್ಕೆಯಾಗಿರುವ 89 ಅಭ್ಯರ್ಥಿಗಳ ಮೊದಲ ಪಟ್ಟಿಯನ್ನು ಬಿಡುಗಡೆ ಮಾಡಲಾಗಿದೆ.